ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–10 ದಿನಾಂಕ: 28–10–2019

# ಪತ್ರಿಕಾ ಪ್ರಕಟಣೆ

## ಸಕಾಲ ಯೋಜನೆಯಡಿ 20 ಕೋಟಿಗೂ ಹೆಚ್ಚು ಅರ್ಜಿಗಳ ವಿಲೇವಾರಿ–

ಸಚಿವ ಎಸ್. ಸುರೇಶ್‌ಕುಮಾರ್

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ಸಕಾಲ ಯೋಜನೆಯಡಿ ಸೆಪ್ಟೆಂಬರ್ ತಿಂಗಳ ಅಂತ್ಯದವರೆಗೆ ಸುಮಾರು 20 ಕೋಟಿಗೂ ಹೆಚ್ಚು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ, ಕಾರ್ಮಿಕ ಹಾಗೂ ಸಕಾಲ ಸಚಿವ ಎಸ್. ಸುರೇಶ್‌ಕುಮಾರ್ ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸೆಪ್ಟೆಂಬರ್ ತಿಂಗಳ ಸಕಾಲ ವರದಿ ಬಿಡುಗಡೆ ಮಾಡಿ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವರು ಇದುವರೆಗೆ ಸಕಾಲ ಯೋಜನೆಯಡಿ 20,09,94,713 ಅರ್ಜಿಗಳನ್ನು ಸ್ವೀಕರಿಸಿದ್ದು ಆ ಪೈಕಿ 20,02,84,447 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ತಿಳಿಸಿದರು.

ಸೆಪ್ಟೆಂಬರ್ ತಿಂಗಳಲ್ಲಿ 25,76,030 ಅರ್ಜಿಗಳನ್ನು ಸ್ವೀಕರಿಸಿದ್ದು ಆ ಪೈಕಿ 25,03,582 ಅರ್ಜಿಗಳನ್ನು ವಿಲೇವಾರಿ ಮಾಡಿದ್ದು ಸೆಪ್ಟೆಂಬರ್ ತಿಂಗಳಲ್ಲಿ ಶೇ. 97.18 ರಷ್ಟು ಗುರಿಸಾಧಿಸಲಾಗಿದೆ ಎಂದು ಮಾತನಾಡಿದ ಸಚಿವರು ಸೆಪ್ಟೆಂಬರ್ ತಿಂಗಳ ಸಕಾಲ ಯೋಜನೆಯ ಮೌಲ್ಯಮಾಪನ ಮಾಡಲಾಗಿದ್ದು ಚಿಕ್ಕಬಳ್ಳಾಪುರ ಜಿಲ್ಲೆ ಪ್ರಥಮ ಸ್ಥಾನದಲ್ಲಿದ್ದು, ಹಾಸನ ಜಿಲ್ಲೆ ದ್ವಿತೀಯ ಸ್ಥಾನ ಹಾಗೂ ಶಿವಮೊಗ್ಗ ಜಿಲ್ಲೆ ತೃತೀಯ ಸ್ಥಾನ ಪಡೆದಿವೆ. ಕಳಪೆ ಸಾಧನೆ ಮಾಡಿದ ಜಿಲ್ಲೆಗಳ ಪೈಕಿ ಬೆಂಗಳೂರು ನಗರ ಜಿಲ್ಲೆ 30 ನೇ ಸ್ಥಾನವನ್ನು, ಬಾಗಲಕೋಟೆ ಜಿಲ್ಲೆ 29 ನೇ ಸ್ಥಾನವನ್ನು ಹಾಗೂ ಬೀದರ್ ಜಿಲ್ಲೆ 28 ನೇ ಸ್ಥಾನವನ್ನು ಪಡೆದಿವೆ ಎಂದು ಸಚಿವರು ತಿಳಿಸಿದರು.

ಸಕಾಲ ಯೋಜನೆಯಡಿ ಕಾಲ್‌ಸೆಂಟರ್ ತೆರೆಯಲಾಗಿದ್ದು ಸೆಪ್ಟೆಂಬರ್ ಮಾಹೆಯಲ್ಲಿ 60 ಸಾವಿರ ಕರೆಗಳನ್ನು ಸ್ವೀಕಾರ ಮಾಡಿದ್ದು ಅತಿ ಹೆಚ್ಚು ಕರೆಗಳು ಅಂದರೆ 16,327 ಕರೆಗಳನ್ನು ಬೆಂಗಳೂರಿನಿಂದ ಸ್ವೀಕರಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಆನ್‌ಲೈನ್ ಮೂಲಕ ಸೇವೆಗಳನ್ನು ಒದಗಿಸುವ "ಸೇವಾ ಸಿಂಧು" ಯೋಜನೆಯನ್ನು ಪ್ರಾರಂಭಿಸಲಾಗಿದ್ದು ರಾಜ್ಯದಲ್ಲಿ ಸುಮಾರು 8 ಸಾವಿರ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಮಾತನಾಡಿದ ಸಚಿವರು ಜನರ ಮನೆಬಾಗಿಲಿಗೆ ಹೋಗಿ ಸೇವೆ ಒದಗಿಸುವ "ಜನಸೇವಕ" ಕಾರ್ಯಕ್ರಮವನ್ನು ನಗರದ ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಪ್ರಾಯೋಗಿಕವಾಗಿ ಆರಂಭಿಸಲಾಗಿದ್ದು ವೃದ್ಧರಿಗೆ ಈ ಯೋಜನೆಯಿಂದ ಲಾಭವಾಗಲಿದೆ ಎಂದು ತಿಳಿಸಿದರು.

ಸಕಾಲ ಯೋಜನೆಯಡಿ ತೊಡಗಿಸಿಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ರಾಜ್ಯಮಟ್ಟದ ಉತ್ತಮ ಅಧಿಕಾರಿಯೊಬ್ಬರಿಗೆ ಪ್ರಮಾಣ ಪತ್ರದ ಜೊತೆ 50 ಸಾವಿರ ರೂ. ಪ್ರೋತ್ಸಾಹಧನ ಹಾಗೂ ಜಿಲ್ಲಾ ಮಟ್ಟದಲ್ಲಿ ಉತ್ತಮವಾಗಿ ಕರ್ತವ್ಯ ನಿರ್ವಹಿಸುವ ಅಧಿಕಾರಿಯೊಬ್ಬರಿಗೆ 10 ಸಾವಿರ ರೂ. ಬಹುಮಾನ ನೀಡಲಾಗುವುದು ಎಂದು ಸಚಿವ ಸುರೇಶ್‌ಕುಮಾರ್ ಅವರು ತಿಳಿಸಿದರು.

ಸಕಾಲ ಯೋಜನೆ ರಾಜ್ಯದ ಮಹಾತ್ವಾಕಾಂಕ್ಷೆ ಯೋಜನೆಯಾಗಿದ್ದು ಕೇಂದ್ರ ಸರ್ಕಾರವು ರಾಜ್ಯದಿಂದ ಮಾಹಿತಿ ಪಡೆದಿದ್ದು ದೇಶಾದ್ಯಂತ್ಯ ಈ ಯೋಜನೆ ಜಾರಿಗೆ ತರಲು ಕೇಂದ್ರ ಸರ್ಕಾರ ಬಯಸಿದೆ ಎಂದು ಅಭಿಪ್ರಾಯಪಟ್ಟ ಸಚಿವರು ಸಕಾಲದಲ್ಲಿ ಪ್ರಥಮಸ್ಥಾನ ಪಡೆದ ಚಿಕ್ಕಬಳ್ಳಾಪುರ ಜಿಲ್ಲೆಯ ಜಿಲ್ಲಾಧಿಕಾರಿ ಶ್ರೀಮತಿ ಲತಾ ಅವರಿಗೆ ಪ್ರಶಂಸನಾ ಪತ್ರವನ್ನು ನೀಡಿದರು.

ಈ ಸಂಧರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಶ್ರೀ ಟಿ. ಎಂ. ವಿಜಯಭಾಸ್ಕರ್, ಇ-ಆಡಳಿತದ ಹೆಚ್ಚುವರಿ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ರಾಜೀವ್ ಚಾವ್ಲಾ ಅವರು ಸೇರಿದಂತೆ ಸಕಾಲ ಯೋಜನೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಪತ್ರಿಜ್ಞಾ ವಿಧಿ ಭೋಧನೆ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸರ್ಕಾರದ ವತಿಯಿಂದ ಇಂದು ಏರ್ಪಡಿಸಿದ್ದ ಜಾಗೃತಿ ಅರಿವು ಸಪ್ತಾಹ – 2019 ರ ಪ್ರತಿಜ್ಞಾ ವಿಧಿಯನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಶ್ರೀ ಎಸ್. ಸುರೇಶ್ ಕುಮಾರ್ ಅವರು ಬೋಧಿಸಿದರು.

ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಅಭಿವೃದ್ಧಿಗೆ ಭ್ರಷ್ಟಾಚಾರವು ಅಡಚಣೆಯಾಗಿದ್ದು, ಜೀವನದ ಎಲ್ಲಾ ಕ್ಷೇತ್ರದಲ್ಲಿ ಪ್ರಾಮಾಣಿಕತೆ ಮತ್ತು ಕಾನೂನಿನ ನಿಯಮಗಳನ್ನು ಅನುಸರಿಸುತ್ತೇನೆ, ಲಂಚವನ್ನು ಪಡೆಯುವುದಿಲ್ಲ ಹಾಗೂ ನೀಡುವುದಿಲ್ಲ ಮತ್ತು ಯಾವುದೇ ಭ್ರಷ್ಟಾಚಾರದ ಘಟನೆಯನ್ನು ಸೂಕ್ತ ಸಂಸ್ಥೆಗೆ ವರದಿ ಮಾಡುತ್ತೇನೆಂದು ಸಚಿವರು ಸಚಿವಾಲಯದ ಅಧಿಕಾರಿಗಳು, ಸಿಬ್ಬಂದಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀ ಟಿ. ಎಂ. ವಿಜಯಭಾಸ್ಕರ್, ಇ–ಆಡಳಿತದ ಹೆಚ್ಚುವರಿ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ರಾಜೀವ್ ಚಾವ್ಲಾ ಅವರು ಸೇರಿದಂತೆ ಸಚಿವಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

1) ಛಾಯಾಚಿತ್ರ ಶೀರ್ಷಿಕೆ :

ಜಾಗೃತಿ ಅರಿವು ಸಪ್ತಾಹ –2019 ಪ್ರತಿಜ್ಞಾ ವಚನ ಕಾರ್ಯಕ್ರಮ ಇಂದು ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಜರುಗಿತು. ಸಮಾರಂಭದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಶ್ರೀ ಎಸ್. ಸುರೇಶ್‌ಕುಮಾರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀ ಟಿ. ಎಂ. ವಿಜಯಭಾಸ್ಕರ್ ಅವರನ್ನು ಚಿತ್ರದಲ್ಲಿ ಕಾಣಬಹುದು.

2) ಛಾಯಾಚಿತ್ರ ಶೀರ್ಷಿಕೆ :

ಸಕಾಲ ಯೋಜನೆ ಸೆಪ್ಟೆಂಬರ್ –2019 ರ ಮಾಹೆಯ ವರದಿಯ ಪುಸ್ತಕವನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಶ್ರೀ ಎಸ್. ಸುರೇಶ್‌ಕುಮಾರ್ ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀ ಟಿ. ಎಂ. ವಿಜಯಭಾಸ್ಕರ್ ಅವರುಗಳು ಇಂದು ಬಿಡುಗಡೆ ಮಾಡಿದರು.

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಕಾಲ ಹಾಗೂ ಕಾರ್ಮಿಕ ಸಚಿವ ಶ್ರೀ ಎಸ್. ಸುರೇಶ್‌ಕುಮಾರ್ ಅವರು ಅಕ್ಟೋಬರ್ 29 ಮತ್ತು 30 ರಂದು ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅಂದೇ ನಗರಕ್ಕೆ ಹಿಂದಿರುಗಲಿದ್ದಾರೆ.

## ಧನಸಹಾಯಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ಕನ್ನಡ ಭಾಷೆ ಸಾಹಿತ್ಯ, ಸಂಗೀತ ನೃತ್ಯ, ಜಾನಪದ ನಾಟಕ, ಯಕ್ಷಗಾನ, ಚಿತ್ರಕಲೆ, ಶಿಲ್ಪಕಲೆ ಮುಂತಾದ ಸೃಜನಶೀಲ ಕಲಾ ಪ್ರಕಾರಗಳಲ್ಲಿ ನಿರಂತರ ಚಟುವಟಿಕೆಗಳನ್ನು ನಡೆಸುತ್ತಿರುವ ನೊಂದಾಯಿತ ಸಂಘ ಸಂಸ್ಥೆಗಳಿಗೆ ಅಸಂಘಟಿತ ಕಲಾವಿದರಿಗೆ ವಾದ್ಯಪರಿಕರ ಹಾಗೂ ವೇಷಭೂಷಣ ಖರೀದಿಗಾಗಿ ಮತ್ತು ಚಿತ್ರ/ಶಿಲ್ಪಕಲಾವಿದರ ಕಲಾಕೃತಿಗಳ ಪ್ರದರ್ಶನಕ್ಕೆ 2019–20 ನೇ ಸಾಲಿಗೆ ಪ್ರೋತ್ಸಾಹ ಧನಸಹಾಯ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ, ಮ್ಯಾನ್ಯುಯಲ್ (ಭೌತಿಕವಾಗಿ) ಅರ್ಜಿ ಆಹ್ವಾನಿಸಲಾಗಿದೆ.

2019 ನೇ ನವೆಂಬರ್ 15 ರೊಳಗೆ ಆಯಾ ಜಿಲ್ಲೆಯ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರಿಗೆ ಮ್ಯಾನ್ಯುಯಲ್ (ಭೌತಿಕವಾಗಿ) ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಗಳಿಗೆ ಆಯಾ ಜಿಲ್ಲಾ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರನ್ನು ಸಂಪರ್ಕಿಸಬಹುದಾಗಿದೆ.